# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ: ತುವಿ: ಡಿಇವಿ-02:2023-24 | 3889 ದಿನಾಂಕ:19.01.2024

**:ಸುತ್ತೋಲೆ:**

ವಿಷಯ:ವಿದ್ಯಾರ್ಥಿಗಳು ಮತದಾರರ ಪಟ್ಟಿಯಲ್ಲಿ ನೊಂದಾಯಿಸಿಕೊಳ್ಳುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:16.01.2024 (ಕಂಡಿಕೆ-231)

*****

ದಿನಾಂಕ:06.01.2024ರಂದು ಜಿಲ್ಲಾ ಪಂಚಾಯತ್ ಕಾರ್ಯಾಲಯದಲ್ಲಿ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ವಿಶ್ವವಿದ್ಯಾನಿಲಯದಿಂದ ಸ್ನಾತಕ/ ಸ್ನಾತಕೋತ್ತರ ಅಧ್ಯಯನ ವಿಭಾಗ, ಘಟಕ ಕಾಲೇಜು ಮತ್ತು ಸಂಯೋಜಿತ ಕಾಲೇಜುಗಳಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ಬಹುತೇಕ ವಿದ್ಯಾರ್ಥಿಗಳು ಇನ್ನೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಣಿ ಮಾಡಿಕೊಳ್ಳದಿರುವುದರಿಂದ ಮತ್ತು EPIC ಕಾರ್ಡನ್ನು ಪಡೆಯದೆ ಇರುವ ವಿಷಯದ ಕುರಿತು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಅಧ್ಯಯನ ವಿಭಾಗಗಳ ಅಧ್ಯಕ್ಷರು/ ಸಂಯೋಜಕರು, ಪ್ರಾಂಶುಪಾಲರು, ಘಟಕ ಮತ್ತು ಸಂಯೋಜಿತ ಕಾಲೇಜುಗಳು ಇವರು ತಮ್ಮ ಕಾಲೇಜಿನ ವಿದ್ಯಾರ್ಥಿಗಳು ಮತದಾರರ ಪಟ್ಟಿಯಲ್ಲಿ ನೊಂದಾಯಿಸಿಕೊಂಡಿರುವ, ಹಾಗೂ ನೊಂದಾಯಿಸಿಕೊಳ್ಳದಿರುವ ವಿದ್ಯಾರ್ಥಿಗಳ ಸಂಖ್ಯೆಯನ್ನು ಹಾಗೂ ನೊಂದಾಯಿಸಿಕೊಳ್ಳದಿರುವ ವಿದ್ಯಾರ್ಥಿಗಳಿಗೆ ಮತದಾರರ ಪಟ್ಟಿಯಲ್ಲಿ ಕಡ್ಡಾಯವಾಗಿ ನೊಂದಾಯಿಸಿಕೊಂಡು ಮಾಹಿತಿಯನ್ನು ಸ್ವೀಪ್ ನೋಡಲ್ ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಹದಿನೈದು ದಿನಗಳೊಳಗಾಗಿ ಜರೂರಾಗಿ ಸಲ್ಲಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

19/1/24

ಉಪಕುಲಸಚಿವರು

ಉಪಕುಲಸಚಿವರು

ಅಭಿವೃದ್ಧಿ ವಿಭಾಗ

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಕರಡು ಕುಲಸಚಿವರಿಂದ ಅನುಮೋದಿಸಿದೆ.

ಗೆ,

1. ಎಲ್ಲಾ ಅಧ್ಯಕ್ಷರು/ಸಂಯೋಜಕರುಗಳಿಗೆ, ಸ್ನಾತಕೊತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ/ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಪ್ರೊ. ಪರಶುರಾಮ ಕೆ. ಜಿ., ಚುನಾವಣಾ ಸಂಬಂಧದ ನೋಡಲ್ ಅಧಿಕಾರಿಗಳು ಮತ್ತು ಪ್ರಾಧ್ಯಾಪಕರು, ಸಮಾಜಕಾರ್ಯ ಅಧ್ಯಯನ ಹಾಗೂ ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಡಾ. ಗುಂಡೇಗೌಡ, ಚುನಾವಣಾ ಸಂಬಂಧದ ನೋಡಲ್ ಅಧಿಕಾರಿಗಳು ಮತ್ತು ಸಹ ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ವಿಭಾಗ, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಡಾ. ಶ್ರೀಪಾದ ಕುಲಕರ್ಣಿ, ಸ್ವೀಪ್ ನೋಡಲ್ ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ಸದರಿ ಮೇಲ್ಕಚಿಡ ಮಾಹಿತಿಯನ್ನು ಸಂಗ್ರಹಿಸಿ ಈ ಕುರಿತು ಅಗತ್ಯ ಕ್ರಮವಹಿಸುವುದು.
4. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಚೇರಿ ಪ್ರತಿ.